CW.1 PW.1

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.202/2023

| | |
|---|---|
| ಸಾಕ್ಷಿದಾರರ ಹೆಸರು | ಮುನೇಶ್ |
| ತಂದೆಯ ಹೆಸರು | ಕೃಷ್ಣ |
| ವಯಸ್ಸು | 23 ವರ್ಷ |
| ವೃತ್ತಿ | ವ್ಯವಸಾಯ |
| ವಿಳಾಸ | ಗೊಲ್ಲರದೊಡ್ಡಿ ಗ್ರಾಮ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 25.05.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿತರ ಪರಿಚಯ ಇರುತ್ತದೆ. ಚಾಸಾ-2 ರಿಂದ 7 ಗೊತ್ತಿರುತ್ತಾರೆ.

ಆರೋಪಿಗಳು ನನ್ನ ಹಾಗೂ ಚಾಸಾ-2 ರಿಂದ 4 ರವರುಗಳ ಮೇಲೆ ಯಾವುದೇ ರೀತಿ ಜಗಳ ಮಾಡಿ ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ ಹಾಗೂ ನನಗೆ ಹೊಡೆದು ಗಾಯ ಪಡಿಸಿರುವುದಿಲ್ಲ. ನಾನು ಈ ಸಂಬಂಧ ಯಾವುದೇ ದೂರು ಮತ್ತು ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ನಾನು ಸುಮಾರು 5-6 ವರ್ಷಗಳ ಹಿಂದೆ ಪೋಲೀಸ್ ಠಾಣೆಗೆ ಬೇರೆ ಯಾವುದೋ ಕೆಲಸದ ಮೇರೆಗೆ ಹೋದಾಗ ಅಲ್ಲಿ 2 ಖಾಲಿ ಬಿಳಿಯ ಹಾಳೆಗಳಿಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ನನಗೆ ಯಾವುದಕ್ಕೆ ಮತ್ತು ಯಾವ ಕಾರಣಕ್ಕೆ ಸಹಿ ಪಡೆದಿರುತ್ತಾರೆ ಎಂದು ಗೊತ್ತಿಲ್ಲ.

CW.1 PW.1

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಕೇವಲ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆ ದೂರು ಆಗಿದ್ದು ಅದನ್ನು ಈಗ ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ವಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ವಾಟೀ ಸವಾಲುಃ ಸ. ಸ. ಅ. ರವರಿಂದ**

ನಾನು ದಿನಾಂಕ 23.12.2022 ರಂದು ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ನಾನು ಪೋಲೀಸರಿಗೆ ಆರೋಪಿತರ ವಿರುದ್ದ ದಿಃ22.12.2022 ರಂದು ನಡೆದ ಕೃತ್ಯದ ಬಗ್ಗೆ ದೂರನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 28.12.2022 ರಂದು ಕನಕಪುರ ತಾಲ್ಲೂಕು ಉಯ್ಯಂಬಳ್ಳಿ ಹೋಬಳಿ ಗೊಲ್ಲರದೊಡ್ಡಿ ಗ್ರಾಮದ ಲಿಂಗಮ್ಮ ರವರ ಖಾಲಿ ನಿವೇಶನದಲ್ಲಿ ನಾನು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ-5 ಮತ್ತು 6 ರವರ ಸಮಕ್ಷಮ ಬೆಳಿಗ್ಗೆ 10 ರಿಂದ 11 ಗಂಟೆಯವರೆಗೂ ಈಗ ಓದಿ ಹೇಳಿದಂತೆ ಮಹಜರ್ ಮಾಡಿ ಒಂದು ಕಾಡು ಜಾತಿಯ ನಾಲ್ಕು ಅಡಿ ಉದ್ದದ ಹಿಡಿಗಾತ್ರದ ದೊಣ್ಣೆಯನ್ನು ಅಮಾನತು ಪಡಿಸಿಕೊಂಡು ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿನಾಂಕ 22.01.2023 ರಂದು ಈಗ ಸವಿಸ್ತಾರವಾಗಿ ಓದಿ ಹೇಳಿದಂತೆ ಮುಂದುವರಿದ ಹೇಳಿಕೆಯನ್ನು ಕೊಟ್ಟಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ನಾವು ಮತ್ತು ಆರೋಪಿತರು ರಾಜಿ ಮಾಡಿಕೊಂಡಿರುತ್ತೇವೆಂನದರೆ ಸರಿ. ಆದ್ದರಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಏನೂ ಇರುವುದಿಲ್ಲ**

CW.1 PW.1

**ಮರುವಿಚಾರಣೆಃ ಇರುವುದಿಲ್ಲ**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

**ಕನಕಪುರ .**